ರಾಜ್ಯದಲ್ಲಿ ಐ.ಟಿ.ಐ. ಕಾಲೇಜುಗಳನ್ನು ಪ್ರಾರಂಭಿಸುವುದು

168(720) ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರ ಪೇಟೆ) ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಐ.ಟಿ.ಐ. ಕಾಲೇಜುಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು?

ಆ) ಹೊಸದಾಗಿ ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; (ಜಿಲ್ಲಾವಾರು ವಿವರ ನೀಡುವುದು)

ಇ) ಕೊಡಗು ಜಿಲ್ಲೆಯಲ್ಲಿ ಎಲ್ಲೆಲ್ಲಿ ಈ ರೀತಿಯ ಸ್ಥಳಗಳನ್ನು ಗುರುತಿಸಲಾಗಿದೆ. ಇದರಲ್ಲಿ ಸೋಮವಾರಪೇಟೆಯು ಒಳಗೊಂಡಿದೆಯೇ?

ಈ) ಈ ವರ್ಷ ಮಂಜೂರು ಮಾಡಲಿರುವ ಸ್ಥಳಗಳ್ಯಾವುವು (ವಿವರ ನೀಡುವುದು)?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ ಸಚಿವರು):

ಅ) ಯಾವ ತಾಲ್ಲೂಕಿನಲ್ಲಿ ಸರ್ಕಾರಿ ಅಥವಾ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಇರುವುದಿಲ್ಲವೋ ಹಾಗೂ ಮುಖ್ಯವಾಗಿ ವೃತ್ತಿ ತರಬೇತಿಗೆ ಬೇಡಿಗೆ ಹೆಚ್ಚಾಗಿರುವ ಸ್ಥಳಗಳಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಆರಂಭಿಸಲಾಗಿದೆ.

ಆ) ಈ ಕೆಳಕಂಡ ಮೂರು ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿದೆ.

1. ಜೀವರ್ಗಿ (ಗುಲ್ಬರ್ಗಾ ಜಿಲ್ಲೆ)
2. ವಗ್ಗ (ದಕ್ಷಿಣ ಕನ್ನಡ ಜಿಲ್ಲೆ)
3. ವಿಟ್ಲ (ದಕ್ಷಿಣ ಕನ್ನಡ ಜಿಲ್ಲೆ)

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಕಾಡಾನೆಗಳ ಹಾವಳಿ

169(722) ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಸೋಮವಾರ ಪೇಟೆ) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1. ರಾಜ್ಯದಲ್ಲಿ ಕಾಡಾನೆಗಳ ಹಾವಳಿಗಳಾಗಿರುವ ಭಾಗಗಳ್ಯಾವುವು?

2. ಈ ವರ್ಷದಲ್ಲಿ ರಾಜ್ಯದ ಯಾವ ಯಾವ ಭಾಗದಲ್ಲಿ ಎಷ್ಟೆಷ್ಟು ಆನೆ ದಾಳಿ ಪ್ರಕರಣಗಳು ಜರುಗಿವೆ?

3. ಇದರಿಂದ ಮರಣ ಹೊಂದಿರುವವರ ಸಂಖ್ಯೆ ಎಷ್ಟು? ತೀವ್ರ ಅಪಘಾತವಾದವರ ಸಂಖ್ಯೆ ಎಷ್ಟು?

4. ಮೃತರಾದವರಿಗೆ ನೀಡುವ ಪರಿಹಾರ ಧನ ಎಷ್ಟು? ಅಪಘಾತರಾದವರಿಗೆ ನೀಡುವ ಪರಿಹಾರ ಧನ ಎಷ್ಟು?